**CC No.370/2023**

**CW 1 : PW 1**

**ದಿನಾಂಕ 02-06-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರತಿಜ್ಞಾವಿಧಿ ಬೋಧಿಸಲಾಯಿತು.**

**<u>ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದ:</u>**

ನನ್ನ ತಂದೆ ಯಾವ ರೀತಿ ಮರಣ ಹೊಂದಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನಿಪಿ-1 ರಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. ನಿಪಿ-1 ನ್ನು ಪೋಲಿಸರು ಬರೆದಿದ್ದು ಅದಕ್ಕೆ ಸಹಿ ಮಾಡು ಎಂದು ಹೇಳಿದಾಗ ಕೇವಲ ಸಹಿ ಮಾಡಿರುತ್ತೇನೆ. ಯಾವುದೇ ಟ್ರಾಕ್ಟರ್ ಮತ್ತು ಟ್ರಾಲಿಯ ನಂಬರ್ ನನಗೆ ಗೊತ್ತಿಲ್ಲ ಮತ್ತು ಅದರ ಮಾಲೀಕರು ಯಾರು ಎಂದು ನನಗೆ ಗೊತ್ತಿಲ್ಲ. ಚಾಸಾ-2 ರಿಂದ 13 ನಮ್ಮ ಕುಟುಂಬದವರು ಮತ್ತು ಪರಿಚಯಸ್ಥರು ಎಂದರೆ ಸರಿ. ನನ್ನ ತಂದೆ ಯಾವ ರೀತಿ ಮರಣ ಹೊಂದಿರುತ್ತಾರೆ ಎಂದು ನನಗೆ ಮಾಹಿತಿ ಇಲ್ಲ ಎಂದರೆ ಸರಿ. ಪರಿಹಾರ ಪಡೆಯುವ ಉದ್ದೇಶದಿಂದ ಸಂಬಂಧಿಕರೊಂದಿಗೆ ಶಾಮೀಲಾಗಿ ಸುಳ್ಳು ಪ್ರಕರಣ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ಸಾಕ್ಷಿದಾರರು ಹೇಳಿದಂತೆ ನನ್ನ ಉಕ್ತ ಲೇಖನಕ್ಕೆ ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ. ಹೇ.ಕೇ. ಸರಿ ಇದೆ.**

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ
ಮಾನವಿ.